## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ತುಂಗಾ ಯೋಜನೆಯಡಿ ಬರುವ ಶಿವಮೊಗ್ಗ ತಾಲ್ಲೂಕಿನ ಸೂಗೂರು ಗ್ರಾಮದಲ್ಲಿ ತುಂಗಭದ್ರಾ ನದಿಗೆ ಅಡ್ಡಲಾಗಿ ಜನ ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ವಿಯರ್ ನಿರ್ಮಿಸುವ ಕಾಮಗಾರಿಯ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.15.00 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಇವರ ಪತ್ರ ಸಂಖ್ಯೆ: ಕನೀನಿ/ತಾಂತ್ರಿಕ/ತುಂಗಾ ಇತರೆ /2017-18/5311 ದಿನಾಂಕ:01.10.2020.

****

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ, ಶಿವಮೊಗ್ಗ ತಾಲ್ಲೂಕಿನ ಸೂಗೂರು ಗ್ರಾಮದಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿಗೆ ತುಂಬಾ ತೊಂದರೆಯಾಗಿದ್ದು, ಬೇಸಿಗೆ ಕಾಲದಲ್ಲಿ ಹೊಳಲೂರು ಹೋಬಳಿಯ ಸುಮಾರು 10 ಗ್ರಾಮಗಳಿಗೆ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ವಿಯರ್ ನಿರ್ಮಾಣ ಮಾಡುವಂತೆ ಸ್ಥಳೀಯ ರೈತರು ಹಾಗೂ ಜನಪ್ರತಿನಿಧಿಗಳು ಮನವಿ ಮಾಡಿರುವ ಮೇರೆಗೆ ಶಿವಮೊಗ್ಗ ಜಿಲ್ಲೆಯ ಶಿವಮೊಗ್ಗ ತಾಲ್ಲೂಕಿನ ತುಂಗಾ ಯೋಜನೆ ಅಡಿ ಬರುವ ಸೂಗೂರು ಗ್ರಾಮದಲ್ಲಿ ತುಂಗಭದ್ರಾ ನದಿಗೆ ಅಡ್ಡಲಾಗಿ ವಿಯರ್ ನಿರ್ಮಿಸಿ, ಸುಮಾರು 10 ಗ್ರಾಮಗಳಿಗೆ ಬೇಸಿಗೆ ಕಾಲದಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಉದ್ದೇಶಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಸದರಿ ಯೋಜನೆಯ ರೂ.15.00 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಯನ್ನು ದಿನಾಂಕ:05.10.2020 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 93ನೇ ಸಭೆಯಲ್ಲಿ ಮಂಡಿಸಲಾಗಿ, ಮಂಡಳಿಯು ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಶಿವಮೊಗ್ಗ ತಾಲ್ಲೂಕಿನ ತುಂಗಾ ಯೋಜನೆ ಅಡಿ ಬರುವ ಸೂಗೂರು ಗ್ರಾಮದಲ್ಲಿ ತುಂಗಭದ್ರಾ ನದಿಗೆ ಅಡ್ಡಲಾಗಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ವಿಯರ್ ನಿರ್ಮಿಸುವ ಕಾಮಗಾರಿಯ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.15.00 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 17 ಎಂಎಂಬಿ 2021, ಬೆಂಗಳೂರು.**
**ದಿನಾಂಕ:19.03.2021**

ತುಂಗಾ ಯೋಜನೆ ಅಡಿ ಬರುವ ಶಿವಮೊಗ್ಗ ತಾಲ್ಲೂಕಿನ ಸೂಗೂರು ಗ್ರಾಮದಲ್ಲಿ ತುಂಗಭದ್ರಾ ನದಿಗೆ ಅಡ್ಡಲಾಗಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ವಿಯರ್

ನಿರ್ಮಿಸುವ ಕಾಮಗಾರಿಯ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.15.00 ಕೋಟಿಗಳ (ಹದಿನೈದು ಕೋಟಿ ರೂಪಾಯಿಗಳು ಮಾತ್ರ) ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 110 ಆಕೋ-1/2021 (ಇ-ಆಫೀಸ್) ದಿನಾಂಕ:17.03.2021 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 14 ಎಂಸಿಎಂ 2021-ಪಿಪಿಡಿ ದಿನಾಂಕ:24.02.2021ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

19/03/2021

**(ಮನೋಹರ ವೈ. ರೊಟ್ಟಿ)**
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-2)
ಜಲಸಂಪನ್ಮೂಲ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ, (ಸಚಿವ ಸಂಪುಟ ಶಾಖೆ) ವಿಧಾನಸೌಧ.
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನಾ ಇಲಾಖೆ.
11. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
12. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ.
13. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ.) ಜಲ ಸಂಪನ್ಮೂಲ ಇಲಾಖೆ.
14. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.